# ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ

**ರಾಜ್ಯ ಕೇಂದ್ರ ಕಾರ್ಯಾಲಯ, #39, ಶಾಂತಿಗೃಹ, ಅರಮನೆರಸ್ತೆ, ಬೆಂಗಳೂರು – 560 001**

**ದೂ:+91–80–2226 0017/2226 7470/2226 1047ಮಿಂಚಂಚೆ:** info@bsgkarnataka.org **ಅಂತರ್ಜಾಲ:** www.bsgkarnataka.org.in


ಸಂಖ್ಯೆ:ಬಿಎಸ್‌ಜಿ/ಎಸ್‌ಹೆಚ್‌ಕ್ಯೂ/1972/2025–26 ದಿನಾಂಕ:01.01.2026

ಎಲ್ಲಾ ಜಿಲ್ಲಾ ಕಾರ್ಯದರ್ಶಿಗಳು
ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್
ಜಿಲ್ಲಾ ಸಂಸ್ಥೆ, ಕರ್ನಾಟಕ

ಮಾನ್ಯರೆ,

ವಿಷಯ:– ಜನವರಿ 2026ರ ಮಾಹೆಯಲ್ಲಿ ಕರ್ನಾಟಕ ರಾಜ್ಯಾದ್ಯಂತ ಸ್ಕೌಟ್ಸ್–ಗೈಡ್ಸ್ ಮಕ್ಕಳಿಂದ ರಸ್ತೆ ಸುರಕ್ಷತಾ ಜಾಗೃತಿ ಮತ್ತು ವಿವಿಧ ಕಾರ್ಯಕ್ರಮಗಳನ್ನು ಜಿಲ್ಲಾ ಹಾಗೂ ಸ್ಥಳೀಯ ಹಂತಗಳಲ್ಲಿ ರಸ್ತೆ ಸುರಕ್ಷತಾ ಮಾಸಾಚರಣೆಯನ್ನು ಸಂಘಟಿಸುವ ಕುರಿತು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷದಂತೆ ಜನವರಿ ಮಾಹೆಯಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆಯನ್ನು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯಾದ್ಯಂತ ಸ್ಥಳೀಯ ಮತ್ತು ಜಿಲ್ಲಾ ಹಾಗೂ ಶಾಲಾ–ಕಾಲೇಜುಗಳ ದಳ ಹಂತಗಳಲ್ಲಿ ಜನವರಿ 2026ರ ಮಾಹೆಯಲ್ಲಿ ರಸ್ತೆ ಸುರಕ್ಷತಾ ಮಾಸಾಚರಣೆಯನ್ನು ಸಂಘಟಿಸುವುದು. ಪ್ರತಿ ವರ್ಷವೂ ಲಕ್ಷಾಂತರ ಜನರು ರಸ್ತೆ ಅಪಘಾತದಲ್ಲಿ ಸಾವನ್ನಪ್ಪುತ್ತಿದ್ದು, ಇಂತಹ ಅಪಘಾತಗಳನ್ನು ತಡೆಗಟ್ಟುವಂತಹ ಹಾಗೂ ರಸ್ತೆ ಸುರಕ್ಷತೆ ನಿಯಮಗಳನ್ನು ಪಾಲಿಸುವ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು, ಈ ಮಾಸಾಚರಣೆಯ ಮುಖ್ಯ ಉದ್ದೇಶವಾಗಿದೆ.

ಈ ಮಾಸಾಚರಣೆಯ ಕಾರ್ಯಕ್ರಮ ಸಂಘಟಿಸುವಲ್ಲಿ ತಮ್ಮ ಜಿಲ್ಲೆಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು (ಆರ್.ಟಿ.ಒ) ಮತ್ತು ಪೊಲೀಸ್ ಇಲಾಖೆಯ ಮಾರ್ಗದರ್ಶನ ಮತ್ತು ಸಹಕಾರವನ್ನು ಪಡೆಯುವುದು. ಈ ಕೆಳಕಂಡ ಮುಖ್ಯ ಅಂಶಗಳನ್ನು ಅಳವಡಿಸಿಕೊಂಡು ರಸ್ತೆ ಸುರಕ್ಷತಾ ಮಾಸಾಚರಣೆಯನ್ನು ಸಂಘಟಿಸುವುದು.

1. ದ್ವಿಚಕ್ರ ವಾಹನ ಚಾಲಕರಿಗೆ ಹೆಲ್ಮೆಟ್ ಹಾಗೂ ಕಾರುಗಳ ವಾಹನ ಚಾಲಕರುಗಳಿಗೆ ಸೀಟ್ ಬೆಲ್ಟ್ ಬಳಕೆಯ ಬಗ್ಗೆ ಜಾಗೃತಿ ಮೂಡಿಸುವುದು.
2. ಪೊಲೀಸ್ ಸಹಕಾರದೊಂದಿಗೆ ಪ್ರಮುಖ ರಸ್ತೆಗಳ ಸಿಗ್ನಲ್‌ಗಳಲ್ಲಿ ಸ್ಕೌಟ್ಸ್–ಗೈಡ್ಸ್‌ಗಳಿಂದ ಹ್ಯಾಂಡ್ ಸಿಗ್ನಲ್ ಮೂಲಕ ರಸ್ತೆ ಸಂಚಾರಿ ನಿಯಮಗಳ ಪ್ರದರ್ಶನ ಮತ್ತು ಜಾಗೃತಿ ಮೂಡಿಸುವುದು.
3. ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿರುವ ರಸ್ತೆ ಸಂಚಾರಿ ತರಬೇತಿ ಕೇಂದ್ರಗಳಿಗೆ ನಮ್ಮ ಮಕ್ಕಳಿಗೆ ತರಬೇತಿ ನೀಡುವುದರ ಮುಖೇನಾ ನಾಗರೀಕರುಗಳಲ್ಲಿ ಜಾಗೃತಿ ಮೂಡಿಸಲು ಅವಕಾಶ ನೀಡುವುದು.
4. ಡ್ರೈವಿಂಗ್ ಲೈಸೆನ್ಸ್, ವಿಮೆ ಮತ್ತು ಇತರೆ ದಾಖಲಾತಿಗಳನ್ನು ಹೊಂದಿ ವಾಹನ ಚಲಾಯಿಸುವ ಬಗ್ಗೆ ಜಾಗೃತಿ ಮೂಡಿಸುವುದು.

5. ಟ್ರಕ್‌ಗಳಿಗೆ, ಬೋರ್ಡ್/ಫಲಕಗಳಿಗೆ ಹಾಗೂ ರಸ್ತೆಗಳಲ್ಲಿ ರೇಡಿಯಂ ಸ್ಟಿಕ್ಕರ್ಸ್ ಮತ್ತು ಮಾರ್ಗಗಳನ್ನು ಸೂಚಿಸಲು ಅಗತ್ಯವಿರುವ ಸಾಮಗ್ರಿಗಳನ್ನು ಇಲಾಖೆಯಿಂದ ಒದಗಿಸಿದಲ್ಲಿ ರೋವರ್ಸ್-ರೇಂಜರ್ಸ್ ವಿದ್ಯಾರ್ಥಿಗಳಿಂದ ಇಲಾಖೆಯವರ ಮಾರ್ಗದರ್ಶನದಲ್ಲಿ ಸ್ಟಿಕ್ಕರ್‌ಗಳನ್ನು ಅಂಟಿಸುವುದು.
6. ರಸ್ತೆ ಸುರಕ್ಷತೆಯ ಕುರಿತು ಬೀದಿ ನಾಟಕ, ಜಾಥಾ ಹಾಗೂ ಇತರೆ ಜಾಗೃತಿ ಕಾರ್ಯಕ್ರಮಗಳು.
7. ರಸ್ತೆ ಸುರಕ್ಷತೆ ಮತ್ತು ನಿಯಮಗಳ ಕುರಿತಾಗಿ ಚಿತ್ರಕಲೆ ಸ್ಪರ್ಧೆಗಳನ್ನು ಆಯೋಜಿಸುವುದು.
8. ಸುರಕ್ಷತೆಯ ಬಗ್ಗೆ ಜನರನ್ನು ಉತ್ತೇಜಿಸಲು ರಸಪ್ರಶ್ನೆ ಸ್ಪರ್ಧೆಗಳನ್ನು ಆಯೋಜಿಸುವುದು.
9. ರಸ್ತೆ ಸುರಕ್ಷತೆಯ ಬಗ್ಗೆ ಶಾಲಾ ಮಕ್ಕಳಿಗೆ ಶಿಕ್ಷಣ ನೀಡಲು ಸಂಚಾರ ಸುರಕ್ಷತಾ ಜಾಗೃತಿ ಆಟಗಳನ್ನು ಆಯೋಜಿಸುವುದು.

ಈ ಮೇಲ್ಕಂಡ ಮಾಸಾಚರಣೆ ಕಾರ್ಯಕ್ರಮಗಳನ್ನು ಎಲ್ಲಾ ಶಾಲಾ-ಕಾಲೇಜುಗಳ ದಳಗಳಲ್ಲಿ, ಸ್ಥಳೀಯ ಮತ್ತು ಜಿಲ್ಲಾ ಮಟ್ಟದಲ್ಲಿ ಯಶಸ್ವಿಯಾಗಿ ಆಯೋಜಿಸಲು, ತಮ್ಮ ಜಿಲ್ಲೆಯ ಎಲ್ಲಾ ಸ್ಥಳೀಯ ಕಾರ್ಯದರ್ಶಿಗಳಿಗೆ ಹಾಗೂ ದಳನಾಯಕರುಗಳಿಗೆ ಮಾಹಿತಿ ನೀಡಿ ರಸ್ತೆ ಸುರಕ್ಷತಾ ಮಾಸಾಚರಣೆಯನ್ನು ಉತ್ತಮವಾಗಿ ಸಂಘಟಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ತಮ್ಮಲ್ಲಿ ಕೋರಲಾಗಿದೆ. ಸದರಿ ಕಾರ್ಯಕ್ರಮವನ್ನು ಸಂಘಟಿಸಿದ ನಂತರ, ವರದಿ ಮತ್ತು ಭಾವಚಿತ್ರಗಳನ್ನು ರಾಜ್ಯ ಸಂಸ್ಥೆಗೆ ಕಳುಹಿಸುವುದು. ಸಂಘಟಕರುಗಳು ಮತ್ತು ಜಿಲ್ಲಾ ಸಂಸ್ಥೆಯ ಪದಾಧಿಕಾರಿಗಳು ಹೆಚ್ಚಿನ ಜವಾಬ್ದಾರಿ ತೆಗೆದುಕೊಂಡು ಸೂಕ್ತ ಕ್ರಮ ವಹಿಸಲು ತಿಳಿಸಿದೆ.

ಸ್ಕೌಟ್-ಗೈಡ್ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

**(ಕೆ. ಗಂಗಪ್ಪಗೌಡ)**
ರಾಜ್ಯ ಕಾರ್ಯದರ್ಶಿ

**ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ:**

1. ಜಿಲ್ಲಾ ಮುಖ್ಯ ಆಯುಕ್ತರು, ಭಾ.ಸ್ಕೌ&ಗೈ, ಕರ್ನಾಟಕ
2. ಜಿಲ್ಲಾ ಆಯುಕ್ತರು(ಸ್ಕೌ/ಗೈ), ಭಾ.ಸ್ಕೌ&ಗೈ, ಕರ್ನಾಟಕ
3. ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿಗಳು, ಭಾ.ಸ್ಕೌ&ಗೈ, ಸಂಬಂಧಪಟ್ಟ ಸ್ಥಳೀಯ ಸಂಸ್ಥೆ
4. ಎಲ್ಲಾ ದಳನಾಯಕರುಗಳು, ಭಾ.ಸ್ಕೌ&ಗೈ, ಸಂಬಂಧಪಟ್ಟ ಶಾಲಾ/ಕಾಲೇಜುಗಳು
5. ಎಎಸ್‌ಒಸಿ/ಡಿಒ/ಡಿಒಟಿ/ಎಸ್‌ಜಿವಿ/ಎಸ್‌ಜಿಎ, ಭಾ.ಸ್ಕೌ&ಗೈ, ಸಂಬಂಧಪಟ್ಟ ಜಿಲ್ಲೆ ಇವರುಗಳು ಸೂಕ್ತ ಕ್ರಮ ಕೈಗೊಳ್ಳುವುದು.
6. ಕಛೇರಿ ಪ್ರತಿ